ಕರ್ನಾಟಕ ಸರ್ಕಾರ

ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

---

ಸಂಖ್ಯೆ : ವಾಇ : ಉ ನಿ : ಸುಮಪ : 2017–18 ದಿನಾಂಕ: 28–10–2017

# ಮಾಧ್ಯಮ ಸಂಸ್ಥೆಗಳ ಮುಖ್ಯಸ್ಥರ ಗಮನಕ್ಕೆ

ಬೆಳಗಾವಿಯಲ್ಲಿ ನವೆಂಬರ್ 13 ರಿಂದ ನಡೆಯಲಿರುವ ವಿಧಾನ ಮಂಡಲದ ಅಧಿವೇಶನ ವರದಿ ಮಾಡಲು ಬೆಂಗಳೂರಿನಿಂದ ನಿಯೋಜಿಸುವ ರಾಜ್ಯಮಟ್ಟದ ಸುದ್ದಿ ವಾಹಿನಿಗಳು ಹಾಗೂ ದಿನ ಪತ್ರಿಕೆಗಳ ಮಾನ್ಯತೆ ಪಡೆದ ಪತ್ರಕರ್ತರು ಹೆಸರುಗಳನ್ನು ವಾರ್ತಾ ಇಲಾಖೆಯ ಸುದ್ದಿ ಮತ್ತು ಪತ್ರಿಕಾ ಶಾಖೆಯಲ್ಲಿ ಶ್ರೀ ಜಡಿಯಪ್ಪ ಗೆದ್ಲಗಟ್ಟಿ ಅವರ ಬಳಿ ನೋಂದಾಯಿಸಲು ಕೋರಿದೆ. ನೋಂದಾಯಿಸಿದ ಮಾಧ್ಯಮ ಪ್ರತಿನಿಧಿಗಳಿಗೆ ಬೆಳಗಾವಿ ಜಿಲ್ಲಾಡಳಿತವು ಒದಗಿಸುವ ಹೋಟೆಲ್ ಕೊಠಡಿಗಳನ್ನು ನೀಡಲಾಗುವುದು.

- ವಸತಿ ಸೌಲಭ್ಯವು ಕಡಿಮೆ ಇರುವ ಕಾರಣ ವಿದ್ಯುನ್ಮಾನ ಮಾಧ್ಯಮದ 6 ಪ್ರತಿನಿಧಿಗಳಿಗೆ(ವರದಿಗಾರರು, ಕ್ಯಾಮರಾಮನ್‌ಗಳು ಹಾಗೂ ತಾಂತ್ರಿಕ ಸಿಬ್ಬಂದಿ ಸೇರಿದಂತೆ) 3 ಡಬ್ಬಲ್ ರೂಂಗಳನ್ನು ಒದಗಿಸಲಾಗುವುದು.
- ಮುದ್ರಣ ಮಾಧ್ಯಮದ 4 ಪ್ರತಿನಿಧಿಗಳಿಗೆ 2 ಡಬ್ಬಲ್ ರೂಂಗಳನ್ನು ಒದಗಿಸಲಾಗುವುದು.
- ಬೆಳಗಾವಿಯ ವರದಿಗಾರರನ್ನು ಹೊರತುಪಡಿಸಿ ಇತರೆ ಜಿಲ್ಲೆಗಳ ಮಾನ್ಯತೆ ಪಡೆದ ಪತ್ರಕರ್ತರನ್ನು ನಿಯೋಜಿಸಿದಲ್ಲಿ ಪತ್ರಕರ್ತರು ಸೇರಿದಂತೆ ಮೇಲೆ ತಿಳಿಸಿದ ಸಂಖ್ಯೆಗೆ ಸೀಮಿತಗೊಳಿಸಲು ಕೋರಿದೆ.
- ತಾಂತ್ರಿಕ ಸಿಬ್ಬಂದಿ ಹಾಗೂ ಒ.ಬಿ. ವಾಹನಗಳ ಪ್ರವೇಶ ಪತ್ರಗಳನ್ನು ಪಡೆಯುವುದು ಆಯಾ ಸಂಸ್ಥೆಯದ್ದೇ ಜವಾಬ್ದಾರಿಯಾಗಿರುತ್ತದೆ.
- ಬೆಳಗಾವಿ ಹೊರತುಪಡಿಸಿ ಇತರೆ ಜಿಲ್ಲೆಗಳಿಂದ ಆಗಮಿಸುವ ಪತ್ರಕರ್ತರಿಗೆ ವಿಧಾನಸಭೆ/ವಿಧಾನ ಪರಿಷತ್ತಿನ ಪ್ರವೇಶ ಪತ್ರಗಳ ಅಗತ್ಯವಿದ್ದಲ್ಲಿ ಈ ಕಛೇರಿಗೆ ಪ್ರತ್ಯೇಕ ಮನವಿ ಸಲ್ಲಿಸಲು ಕೋರಿದೆ.
- ಬೆಂಗಳೂರಿನ ಪತ್ರಕರ್ತರಿಗೆ ಈಗಾಗಲೇ ನೀಡಿರುವ 2017 ರ ಡಿಸೆಂಬರ್ ಅವಧಿ ಇರುವ ಪ್ರವೇಶಪತ್ರವೇ ಅನ್ವಯವಾಗುತ್ತದೆ.
- ವಸತಿಗಾಗಿ ಹೆಸರು ನೋಂದಾಯಿಸಲು 2017 ನವೆಂಬರ್ 2 ಕೊನೆಯ ದಿನ. ವಸತಿ ಸೌಲಭ್ಯ ಕಲ್ಪಿಸಲು ಪೂರ್ವಸಿದ್ದತೆ ಅಗತ್ಯವಿರುವುದರಿಂದ ಕೊನೆಯ ದಿನಾಂಕದ ನಂತರ ಬಂದ ಮನವಿಗಳನ್ನು ಸ್ವೀಕರಿಸಲಾಗುವುದಿಲ್ಲ.
- ಸಂಸ್ಥೆಯ ಮುಖ್ಯಸ್ಥರು ಅಧಿವೇಶನದಲ್ಲಿ ಭಾಗವಹಿಸುವ ಪತ್ರಕರ್ತರ ಹೆಸರು, ಹುದ್ದೆ, ದೂರವಾಣಿ ಸಂಖ್ಯೆ ಮೊದಲಾದ ವಿವರಗಳನ್ನು ನಮೂದಿಸಿ ಶಿಫಾರಸ್ಸು ಪತ್ರವನ್ನು ಸುದ್ದಿ ಮತ್ತು ಪತ್ರಿಕಾ ಶಾಖೆಗೆ ಕಳುಹಿಸಲು ಕೋರಿದೆ.
- ಹೆಚ್ಚಿನ ಮಾಹಿತಿಗೆ ಶ್ರೀ ಜಡಿಯಪ್ಪ ಗೆದ್ಲಗಟ್ಟಿ (22028011) ಇವರನ್ನು ಸಂಪರ್ಕಿಸಬಹುದು.

(ಡಾ. ಹರ್ಷ ಪಿ.ಎಸ್.)

ನಿರ್ದೇಶಕರು

## ಪತ್ರಿಕಾ ಅಮಂತ್ರಣ

1. ವನ್ಯಜೀವಿ ಸಂರಕ್ಷಣೆ ಹಾಗೂ ಅರಣ್ಯ ರಕ್ಷೆಯಲ್ಲಿ ವಿಶೇಷ ಸೇವೆ ಸಲ್ಲಿಸಿರುವ ಅರಣ್ಯ ನೌಕರರುಗಳಿಗೆ ಪ್ರಶಸ್ತಿ ಪ್ರದಾನ ಸಮಾರಂಭ–2017.

**ಪ್ರಶಸ್ತಿ ಪ್ರದಾನ:**
ಬಿ. ರಮಾನಾಥ್ ರೈ, ಪರಿಸರ ಮತ್ತು ಅರಣ್ಯ ಇಲಾಖೆ ಸಚಿವರು.

**ಮುಖ್ಯ ಅತಿಥಿ:**
ರಾಮಲಿಂಗಾ ರೆಡ್ಡಿ, ಗೃಹ ಮಂತ್ರಿಗಳು.

ದಿನಾಂಕ: 30–10–2017, ಸೋಮವಾರ, ಸಮಯ: ಸಂಜೆ 4–00 ಗಂಟೆಗೆ.
ಸ್ಥಳ: ಸಮ್ಮೇಳನ ಸಭಾಂಗಣ, 8ನೇ ಮಹಡಿ, ಅರಣ್ಯ ಭವನ, ಮಲ್ಲೇಶ್ವರಂ,
ಬೆಂಗಳೂರು – 560 003.

## ಪತ್ರಿಕಾ ಪ್ರಕಟಣೆ

**ಸಂಖ್ಯೆ 226/346**

## ಎಂ.ಎಸ್.ಐ.ಎಲ್‌ನಿಂದ 900 ಮದ್ಯ ಮಳಿಗೆ – ಸಚಿವ ತಿಮ್ಮಾಪುರ

**ಬೆಂಗಳೂರು, ಅಕ್ಟೋಬರ್ 28, (ಕರ್ನಾಟಕ ವಾರ್ತೆ)**

**ಗ್ರಾಮೀಣ ಭಾಗದಲ್ಲಿ ಮಾರಾಟ ದರಕ್ಕಿಂತ ಹೆಚ್ಚು ಹಣ ಸಂಗ್ರಹ ಮಾಡುತ್ತಿರುವ ಮಧ್ಯದಂಗಡಿಗಳ ಮೇಲೆ ನಿಯಂತ್ರಣ ತರಲು ರಾಜ್ಯ ಸರ್ಕಾರಿ ಸ್ವಾಮ್ಯದ ಎಂ.ಎಸ್.ಐ.ಎಲ್. ಮೂಲಕ 900 ಮಳಿಗೆಗಳನ್ನು ತೆಗೆಯುವ ಪ್ರಕ್ರಿಯೆ ಆರಂಭಗೊಂಡಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ ಅವರು ತಿಳಿಸಿದರು.**

**ವಿಧಾನ ಸೌಧದ ತಮ್ಮ ಕಛೇರಿಯಲ್ಲಿ ಭೇಟಿಯಾದ ಸುದ್ದಿಗಾರರೊಂದಿಗೆ ಇಂದು ಮಾತನಾಡಿದ ಸಚಿವರು ಮದ್ಯ ಬಾಟಲುಗಳ ಮೇಲೆ ಇರುವ ದರದಂತೆ ಗ್ರಾಹಕರಿಂದ ಹಣ ಸಂಗ್ರಹ ಮಾಡಬೇಕು. ಅದಕ್ಕಿಂತ ಹೆಚ್ಚು ಹಣ ವಸೂಲು ಮಾಡುತ್ತಿರುವ ಬಗ್ಗೆ**

ದೂರುಗಳು ಬಂದಿರುವ  ಹಿನ್ನೆಲೆಯಲ್ಲಿ ಅಂತಹ ಮದ್ಯದ ಅಂಗಡಿಗಳ ಮೇಲೆ ಅಬಕಾರಿ ನಿಯಮದಡಿ ಕಠಿಣ ಕ್ರಮ ಕೈಗೊಳ್ಳಲಾಗುವುದು ಎಂದು ಸಚಿವರು ತಿಳಿಸಿದರು.

ಗ್ರಾಹಕರಿಗೆ ಗುಣಮಟ್ಟದ ಮದ್ಯ ಸರಬರಾಜು ಮಾಡುವ ವಿಚಾರದಲ್ಲಿ ಸರ್ಕಾರ ಕಠಿಣ ನಿಲುವು ತೆಗೆದುಕೊಂಡು ಎಂ.ಎಸ್.ಐ.ಎಲ್ ಮೂಲಕ ವಿತರಿಸುವ ಪ್ರಕ್ರಿಯೆ ಆರಂಭಗೊಂಡಿದ್ದು ಈಗಾಗಲೇ 139 ಘಟಕಗಳು ಕಾರ್ಯಾರಂಭ ಮಾಡುತ್ತಿವೆ. ರಾಜ್ಯಾದ್ಯಂತ ಎಂ.ಎಸ್.ಐ.ಎಲ್ ಮಳಿಗೆಗೆ ಹೆಚ್ಚಿನ ಬೇಡಿಕೆ ಇದ್ದು ಈ ಅಬಕಾರಿ ವರ್ಷಾಂತ್ಯದ ಒಳಗಾಗಿ 900 ಮಳಿಗೆಗಳನ್ನು ಆರಂಭಿಸಲಾಗುವುದು ಎಂದು ಸಚಿವರು ತಿಳಿಸಿದರು.

ಕೇಂದ್ರ ಸರ್ಕಾರ ಜಾರಿಗೆ ತರಲು ಉದ್ದೇಶಿಸಿರುವ ನೂತನ ಅಬಕಾರಿ ಕಾಯ್ದೆ ಅನ್ವಯ ಕೈಗಾರಿಕೆಗಳಿಗೆ ನೀಡುವ ಸ್ಪಿರಿಟ್ ಮೇಲೆ ರಾಜ್ಯದ ನಿಯಂತ್ರಣ ಇಲ್ಲದಂತೆ ಕಾನೂನು ತರಲು ಹೊರಟಿದ್ದಾರೆ.  ಇದರಿಂದ ಸೆಕೆಂಡ್ಸ್ ಹಾವಳಿ, ನಕಲು ಮದ್ಯ ತಯಾರಿಕೆಯಾಗುವ ಶಂಕೆ ಇದೆ. ಈ ಕುರಿತಂತೆ ರಾಜ್ಯ ತನ್ನ ವಿರೋಧ ನಿಲುವನ್ನು ಕೇಂದ್ರದ ಮುಂದೆ ಪ್ರಸ್ತಾಪಿಸಲಿದೆ ಎಂದರು.

ರಾಜ್ಯಾದ್ಯಂತ ಶಾಲಾ ಕಾಲೇಜುಗಳ ಆವರಣಗಳಲ್ಲಿ ಶಾಲಾ, ಕಾಲೇಜುಗಳ ಮಾಧಕ ವಸ್ತುಗಳ ಮಾರಾಟ ನಿಯಂತ್ರಣಕ್ಕೆ ಅಬಕಾರಿ ತನಿಖಾದಳವನ್ನು ಬಲಪಡಿಸಲಾಗಿದೆ. ಶಿವಮೊಗ್ಗ, ಉಡುಪಿ, ಮಂಗಳೂರು, ಕೋಲಾರ ಮತ್ತು ಬೆಂಗಳೂರಿನಲ್ಲಿ ತನಿಖಾ ತಂಡವನ್ನು ಚುರುಕುಗೊಳಿಸಲಾಗಿದೆ ಎಂದು ಸಚಿವರು ಹೇಳಿದರು.

ಕೇರಳ ಮಾದರಿಯಲ್ಲಿ ನೀರಾ ಇಳಿಸಿ ಕೇರಳ ಮಾದರಿಯಲ್ಲಿಯೇ ಸಾಚೇಟ್ ಮೂಲಕ ಗ್ರಾಹಕರಿಗೆ ಮಾರಾಟ ಮಾಡುವ ಅಬಕಾರಿ ಕಾಯ್ದೆ ಅನುಷ್ಠಾನದ ಬಗ್ಗೆ ಸೋಮವಾರದಂದು ಇಲಾಖಾ ಅಧಿಕಾರಿಗಳ ಜೊತೆ ಸಭೆ ನಡೆಸಲಾಗುವುದು ಎಂದರು.

ಹೊಸ ಮದ್ಯದಂಗಡಿ ಲೈಸೆನ್ಸ್ ನೀಡಿಕೆ ಕುರಿತಂತೆ ಸಾರ್ವಜನಿಕರು ಸುಪ್ರೀಂಕೋರ್ಟಿನಲ್ಲಿ ರಿಟ್ ಅರ್ಜಿ ಸಲ್ಲಿಸಿದ್ದಾರೆ.  ನ್ಯಾಯಾಲಯದ ತೀರ್ಪಿನ ನಂತರ ಸರ್ಕಾರ ಅಗತ್ಯ ಕ್ರಮ ಕೈಗೊಳ್ಳಲಿದೆ ಎಂದರು.

ಅಬಕಾರಿ ಇಲಾಖೆಯಲ್ಲಿ ದಕ್ಷತೆ ಮತ್ತು ಶಿಸ್ತು ತರುವ ಹಿನ್ನೆಲೆಯಲ್ಲಿ ಇಡೀ ಇಲಾಖೆಯನ್ನು ಪುನರ್ ರಚನೆ ಮಾಡಲು ಉದ್ದೇಶಿಸಲಾಗಿದೆ.  ಈಗಿರುವ ನಾಲ್ಕು ವಿಭಾಗದ ಹಿರಿಯ ಅಧಿಕಾರಿಗಳ ಸಂಖ್ಯೆಯನ್ನು 8 ಕ್ಕೆ ಹೆಚ್ಚಿಸುವುದು ಹಾಗೂ ಖಾಲಿ ಇರುವ ವಿವಿದ ಹಂತದ 326 ಸಿಬ್ಬಂದಿಗಳ ನೇಮಕಾತಿ ಪ್ರಕ್ರಿಯೆಗೆ ಚಾಲನೆ ದೊರೆತಿದೆ ಎಂದು ಅಬಕಾರಿ ಸಚಿವ ಆರ್.ಬಿ. ತಿಮ್ಮಾಪೂರ್ ಅವರು ವಿವರಿಸಿದರು.

ಸಂಖ್ಯೆ 227/347

## ಕೊಡಗು ಸೈನಿಕ ಶಾಲೆ – 6 ಮತ್ತು 9ನೇ ತರಗತಿ ದಾಖಲಾತಿಗಾಗಿ ಪ್ರವೇಶ ಪರೀಕ್ಷೆ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಸೈನಿಕ ಶಾಲೆ ಕೊಡಗು ಇವರು 6 ಮತ್ತು 9ನೇ ತರಗತಿ ದಾಖಲಾತಿಗಾಗಿ ಪ್ರವೇಶ ಬಯಸುವ ವಿದ್ಯಾರ್ಥಿಗಳಿಂದ ಅರ್ಜಿ ಆಹ್ವಾನಿಸಿದೆ.

ಆರನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಯು 02ನೇ ಜುಲೈ 2007 ರಿಂದ 01 ನೇ ಜುಲೈ 2008 ರೊಳಗೆ (ಎರಡೂ ದಿನಗಳು ಸೇರಿ) ಜನಿಸಿರಬೇಕು. 9 ನೇ ತರಗತಿಗೆ ಪ್ರವೇಶ ಬಯಸುವ ಅಭ್ಯರ್ಥಿಯು 02 ಜುಲೈ 2004 ರಿಂದ 01 ನೇ 2005 ರೊಳಗೆ (ಎರಡೂ ದಿನಗಳು ಸೇರಿ) ಜನಿಸಿರಬೇಕು.

ಹೆಚ್ಚಿನ ಮಾಹಿತಿ ಹಾಗೂ ಅರ್ಜಿ ನಮೂನೆಗಾಗಿ ಸೈನಿಕ ಶಾಲೆಯ ವೆಬ್‌ಸೈಟ್ **www.sainikschoolkodagu.edu.in** ಅನ್ನು ಅಕ್ಟೋಬರ್ 16 ರಿಂದ 30 ನವೆಂಬರ್ 2017 ರವರೆಗೆ ಸಂಪರ್ಕಿಸಿ ಆನ್‌ಲೈನ್ ಅರ್ಜಿಯನ್ನು ಭರ್ತಿಮಾಡಿ ಸಲ್ಲಿಸಬಹುದಾಗಿದೆ.

ವಿದ್ಯಾರ್ಥಿಗಳನ್ನು ರಾಷ್ಟ್ರೀಯ ರಕ್ಷಣಾ ಅಕಾಡೆಮಿ/ಭಾರತೀಯ ನೌಕಾ ಅಕಾಡೆಮಿಗೆ ಸೇರಿಸಲು ಶೈಕ್ಷಣಿಕವಾಗಿ, ಮಾನಸಿಕವಾಗಿ ಮತ್ತು ದೈಹಿಕವಾಗಿ ತರಬೇತಿಗೊಳಿಸುವುದು ಉದ್ದೇಶವಾಗಿದೆ.

ಅರ್ಜಿಯನ್ನು ಸಲ್ಲಿಸಲು ಡಿಸೆಂಬರ್ 5 2017 ರ ಶನಿವಾರ ಕೊನೆಯ ದಿನವಾಗಿರುತ್ತದೆ ಹಾಗೂ 07 ಜನವರಿ 2018ರಂದು ಪ್ರವೇಶ ಪರೀಕ್ಷೆಯನ್ನು ನಡೆಸಲಾಗುವುದು ಎಂದು ಸೈನಿಕ ಶಾಲೆ, ಕೊಡಗು ತನ್ನ ಪ್ರಕಟಣೆಯಲ್ಲಿ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 228/348

## ಜಾನುವಾರುಗಳಿಗೆ ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮ – ಉಚಿತ ಸಹಾಯವಾಣಿ

ಬೆಂಗಳೂರು, ಅಕ್ಟೋಬರ್ 28 (ಕರ್ನಾಟಕ ವಾರ್ತೆ)

ಪಲ್ಸ್ ಪೋಲೀಯೋ ಮಾದರಿಯಲ್ಲಿ ಜಾನುವಾರುಗಳಿಗೆ ಕಾಲುಬಾಯಿ ಜ್ವರ ಲಸಿಕಾ ಕಾರ್ಯಕ್ರಮವನ್ನು ನವೆಂಬರ್ 1 ರಿಂದ 25 ರವರೆಗೆ ಬೆಂಗಳೂರು ನಗರ ಜಿಲ್ಲೆಯಲ್ಲಿ ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಹಾಗೂ ಬಿಬಿಎಂಪಿ ಹಮ್ಮಿಕೊಂಡಿದೆ.

ಬೆಂಗಳೂರು ಬಿ.ಬಿ.ಎಂ.ಪಿ ವ್ಯಾಪ್ತಿಯಲ್ಲಿ ಮತ್ತು ಬೆಂಗಳೂರು ನಗರ ಜಿಲ್ಲೆಯಲ್ಲಿನ ಪಶುಪಾಲಕರು ತಮ್ಮ ಜಾನುವಾರುಗಳಿಗೆ ಉಚಿತವಾಗಿ ಕಾಲುಬಾಯಿ ಜ್ವರ ಲಸಿಕೆಯನ್ನು ಹಾಕಿಸುವಂತೆ ಕೋರಿದೆ.

ಹೆಚ್ಚಿನ ಮಾಹಿತಿಗಾಗಿ ಉಪ ನಿರ್ದೇಶಕ ಡಾ. ಎನ್. ಸೋಮಶೇಖರ್, ಮೊ. ಸಂಖ್ಯೆ 9845752466, ಬೆಂಗಳೂರು ದಕ್ಷಿಣ ತಾಲ್ಲೂಕಿನ ಸಹಾಯಕ ನಿರ್ದೇಶಕ ಡಾ. ರವಿ ಮೊ. ಸಂಖ್ಯೆ 9448732044, ಆನೇಕಲ್ ತಾಲ್ಲೂಕಿನ ಸಹಾಯಕ ನಿರ್ದೇಶಕ ಡಾ ಕೃಷ್ಣಮೂರ್ತಿ ಮೊ.ಸಂ. 9448028038, ಬೆಂಗಳೂರು ಉತ್ತರ ತಾಲ್ಲೂಕಿನ ಸಹಾಯಕ ನಿರ್ದೇಶಕ ಡಾ. ರಾಜೇಂದ್ರನ್ – ಮೊ.ಸಂ. 9448714967, ಬೆಂಗಳೂರು ಪೂರ್ವ ತಾಲ್ಲೂಕಿನ ಸಹಾಯಕ ನಿರ್ದೇಶಕ ಡಾ. ಬಿ.ಕೆ. ರವಿ – ಮೊ.ಸಂಖ್ಯೆ 9448085002. ಹಾಗೂ ಉಚಿತ ಸಹಾಯವಾಣಿ ಸಂಖ್ಯೆ 080–23417100 ಮತ್ತು ಹತ್ತಿರದ ಪಶುವೈದ್ಯ ಆಸ್ಪತ್ರೆಗಳನ್ನು ಸಂಪರ್ಕಿಸಬಹುದಾಗಿದೆ ಎಂದು ಪಶುಪಾಲನಾ ಮತ್ತು ಪಶುವೈದ್ಯ ಸೇವಾ ಇಲಾಖೆ ಪ್ರಕಟಣೆ ತಿಳಿಸಿದೆ.

ಎಸ್‌ಎಂ:ಜೆಡಿ:ಜಿಪಿಆರ್.

ಸಂಖ್ಯೆ 229/349

## ಕಬ್ಬನ್‌ಪಾರ್ಕ್‌ನಲ್ಲಿ ಈ ಭಾನುವಾರ

ಬೆಂಗಳೂರು, ಅಕ್ಟೋಬರ್ 28, (ಕರ್ನಾಟಕ ವಾರ್ತೆ)

ಶ್ರೀ ಚಾಮರಾಜೇಂದ್ರ ಉದ್ಯಾನವನ (ಕಬ್ಬನ್ ಪಾರ್ಕ್) ಒಳರಸ್ತೆಗಳಲ್ಲಿ ಭಾನುವಾರದ ದಿನಗಳಂದು ಸಾರ್ವಜನಿಕ ವಾಹನ ಸಂಚಾರವನ್ನು ನಿಷೇಧಿಸಲಾಗಿದ್ದು, ಉದ್ಯಾನವನದ ಆವರಣದಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರ ಅನುಕೂಲಕ್ಕಾಗಿ ಪ್ರತಿ ಭಾನುವಾರದ ದಿನಗಳಂದು ವಿವಿಧ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗುತ್ತಿರುತ್ತದೆ. ದಿನಾಂಕ: 29–10–2017ರ ಭಾನುವಾರದಂದು ಶ್ರೀ ಚಾಮರಾಜೇಂದ್ರ ಉದ್ಯಾನವನದ (ಕಬ್ಬನ್ ಉದ್ಯಾನವನ) ಬ್ಯಾಂಡ್ ಸ್ಟ್ಯಾಂಡ್ ಆವರಣ ಹಾಗೂ ಮುಂಭಾಗದ ರಸ್ತೆಯಲ್ಲಿ ಮತ್ತು ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಸುತ್ತಮುತ್ತಲಿನ ಪ್ರದೇಶದಲ್ಲಿ

ಈ ಕೆಳಕಂಡ ಕಾರ್ಯ ಚಟುವಟಿಕೆಗಳನ್ನು ಹಮ್ಮಿಕೊಳ್ಳಲಾಗಿರುತ್ತದೆ. ಸಾರ್ವಜನಿಕರು, ಪ್ರವಾಸಿಗರು ಮತ್ತು ನಡಿಗೆದಾರರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ, ಸದರಿ ಕಾರ್ಯಚಟುವಟಿಕೆಗಳ ಸದುಪಯೋಗವನ್ನು ಪಡೆದುಕೊಳ್ಳುವಂತೆ ಈ ಮೂಲಕ ಕೋರಲಾಗಿದೆ.

1) ಬೆಳಿಗ್ಗೆ 06.00 ಗಂಟೆಯಿಂದ ಬೆಳಿಗ್ಗೆ 07.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಉದಯರಾಗ" ಎಂಬ ಶೀರ್ಷಿಕೆಯಡಿ **ಶ್ರೀಮತಿ ಸಿದ್ದಪ್ಪ ತಿಮ್ಮಣ್ಣ ಚನ್ನದಾಸರು ಮತ್ತು ತಂಡ ಕೊಪ್ಪಳ** ರವರಿಂದ **ಸುಗಮ ಸಂಗೀತ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
2) ಸಂಜೆ 05.00 ಗಂಟೆಯಿಂದ ಸಂಜೆ 06.00 ಗಂಟೆಯವರೆಗೆ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಸಹಯೋಗದೊಂದಿಗೆ ಬ್ಯಾಂಡ್ ಸ್ಟ್ಯಾಂಡ್ ಆವರಣದಲ್ಲಿ "ಉದ್ಯಾನವನದಲ್ಲಿ ಸಂಧ್ಯಾರಾಗ" ಎಂಬ ಶೀರ್ಷಿಕೆಯಡಿ **ಶ್ರೀ. ಶ್ರೀಕಂಠ ಮೂರ್ತಿ ಮತ್ತು ತಂಡ ಬೆಂಗಳೂರು** ರವರಿಂದ **ಜನಪದ ಗೀತೆ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
3) ಬೆಳಿಗ್ಗೆ 8.00 ಗಂಟೆಯಿಂದ ಸಂಜೆ 5.00 ಗಂಟೆಯವರೆಗೆ ಉದ್ಯಾನವನದಲ್ಲಿರುವ ಒಳರಸ್ತೆಗಳಲ್ಲಿ ನಗರ ಭೂಸಾರಿಗೆ ನಿರ್ದೇಶನಾಲಯರವರ ಸಹಯೋಗದೊಂದಿಗೆ ಬಾಡಿಗೆ ರಹಿತ ಸೈಕಲ್ ಸವಾರಿ ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
4) ಕಬ್ಬನ್ ಉದ್ಯಾನವನದ ಒಳರಸ್ತೆಗಳಲ್ಲಿ ಸಾರ್ವಜನಿಕರು, ಪ್ರವಾಸಿಗರು ಮತ್ತು ವಯೋವೃದ್ಧರ ಅನುಕೂಲಕ್ಕಾಗಿ ಎರಡು ಸಂಖ್ಯೆಯ ಪರಿಸರ ಸ್ನೇಹಿ ವಿದ್ಯುತ್‌ಚಾಲಿತ ವಾಹನಗಳ ಸೇವೆಯನ್ನು ನಿಗಧಿತ ಶುಲ್ಕ ನೀಡಿ ಸಾರ್ವಜನಿಕರು ಪಡೆಯಬಹುದು.

**ಈ ಭಾನುವಾರದ ವಿಶೇಷ ಕಾರ್ಯಕ್ರಮಗಳು:**

**I.ಸ್ಥಳ: ಬ್ಯಾಂಡ್ ಸ್ಟ್ಯಾಂಡ್ ಆವರಣ**

- ಬೆಳಿಗ್ಗೆ 7.00 ಗಂಟೆಯಿಂದ 8.00 ಗಂಟೆಯವರೆಗೆ **ಯೂನಿವರ್ಸ್ ಆರ್ಟ್ ಫೌಂಡೇಶನ್** ಸಂಸ್ಥೆಯ ಸಹಯೋಗದೊಂದಿಗೆ **ಕುಮಾರಿ. ಸುಮಂಗಲ ವರಣ್** ರವರಿಂದ **ಭರತನಾಟ್ಯ** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ.
- ಬೆಳಿಗ್ಗೆ 8.00 ಗಂಟೆಯಿಂದ 9.00 ಗಂಟೆಯವರೆಗೆ ಶ್ರೀವಾಣಿ ವಿದ್ಯಾ ಕೇಂದ್ರ**, ಮಾಗಡಿರೋಡ್, ಬೆಂಗಳೂರು ಶಾಲಾ ವಿದ್ಯಾರ್ಥಿಗಳಿಂದ ಸಾಂಸ್ಕೃತಿಕ ಕಾರ್ಯಕ್ರಮವನ್ನು** ಏರ್ಪಡಿಸಲಾಗಿದೆ.

**II.ಸ್ಥಳ: ಶ್ರೀ ಚಾಮರಾಜೇಂದ್ರ ಒಡೆಯರ್ ಪ್ರತಿಮೆಯ ಹತ್ತಿರ**

- ಬೆಳಿಗ್ಗೆ 6.30 ರಿಂದ ಬೆಳಿಗ್ಗೆ 10.00 ಗಂಟೆಯವರೆಗೆ ದಿ ಹಿಂದೂ ಗ್ರೂಪ್ ವತಿಯಿಂದ **"ಸೈಕಲ್ ಡೇ"** ಕಾರ್ಯಕ್ರಮವನ್ನು ಏರ್ಪಡಿಸಲಾಗಿದೆ. ಜುಂಬಾ, ಯೋಗಾ, ಸೈಕಲ್ ರ‍್ಯಾಲಿ, ಓದುವ ಜೋನ್ ಹಾಗೂ ಇನ್ನಿತರೇ ಮನರಂಜನೆ ಕಾರ್ಯಕ್ರಮಗಳನ್ನು ಏರ್ಪಡಿಸಲಾಗಿದೆ.

**ಸಂಖ್ಯೆ 230/350**

# ಕರ್ನಾಟಕ ಭೋವಿ ಅಭಿವೃದ್ಧಿ ನಿಗಮಕ್ಕೆ ಸದಸ್ಯರ ನೇಮಕ

**ಬೆಂಗಳೂರು, ಅಕ್ಟೋಬರ್ 28, (ಕರ್ನಾಟಕ ವಾರ್ತೆ)**

**ಕರ್ನಾಟಕ ರಾಜ್ಯ ಭೋವಿ ಅಭಿವೃದ್ಧಿ ನಿಗಮಕ್ಕೆ ಪಿ. ಕುಮಾರಸ್ವಾಮಿ, ಬಿನ್ ರಾಮಯ್ಯ ಸಂಡೂರು, ಬಳ್ಳಾರಿ ಜಿಲ್ಲೆ ಹಾಗೂ ಟಿ. ವೈ. ಕುಮಾರ್ ಬಿನ್ ಯಲ್ಲಪ್ಪ, ಚಿಕ್ಕಪೇಟೆ, ಬೆಂಗಳೂರು ಇವರುಗಳನ್ನು ಅಧಿಕಾರೇತರ ಸದಸ್ಯರನ್ನಾಗಿ ನೇಮಕ ಮಾಡಲಾಗಿದೆ ಎಂದು ಪ್ರಕಟಣೆ ತಿಳಿಸಿದೆ.**